ಕರ್ನಾಟಕ ವಿಧಾನ ಪರಿಷತ್

1)	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	378
2).	ಮಾನ್ಯ ಸದಸ್ಯರ ಹೆಸರು	ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮ ನಿರ್ದೇಶನ ಹೊಂದಿದವರು)
3)	ಉತ್ತರಿಸಬೇಕಾದ ದಿನಾಂಕ	17/07/2019
4)	ಉತ್ತರಿಸುವವರು	ಮುಜರಾಯಿ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು

****

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ವತಿಯಿಂದ ಇಲ್ಲಿಯವರೆಗೆ ಎಷ್ಟು ಮಂದಿ ನಿರುದೋಗಿಗಳನ್ನು ಗುರುತಿಸಲಾಗಿದೆ. (ವಿವರ ಒದಗಿಸುವುದು)	ರಾಜ್ಯದ ಎಲ್ಲಾ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರಗಳಲ್ಲಿ ಜೂನ್-2019ರ ಅಂತ್ಯಕ್ಕೆ ಒಟ್ಟು 3,44,662 ಅಭ್ಯರ್ಥಿಗಳು ನೋಂದಾಯಿಸಿ ಚಾಲ್ತಿ ದಾಖಲೆಯಲ್ಲಿರುತ್ತಾರೆ.
ಆ)	ಅವರುಗಳಲ್ಲಿ ಈವರೆಗೆ ಉದ್ಯೋಗ ಸೌಲಭ್ಯ ಕಲ್ಪಿಸಿಕೊಟ್ಟಿರುವವರ ಸಂಖ್ಯೆ ಎಷ್ಟು (ವಿವರ ಒದಗಿಸುವುದು)	2018-19ನೇ ಸಾಲಿನಲ್ಲಿ ರಾಜ್ಯದ ಎಲ್ಲಾ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರಗಳ ಮೂಲಕ 189 ಉದ್ಯೋಗ ಮೇಳಗಳನ್ನು ಆಯೋಜಿಸಿದ್ದು ಆ ಮೂಲಕ ಒಟ್ಟು 27,748 ಅಭ್ಯರ್ಥಿಗಳಿಗೆ ಉದ್ಯೋಗಾವಕಾಶ ಕಲ್ಪಿಸಲಾಗಿದೆ.
ಇ)	ಗುರುತಿಸಲ್ಪಟ್ಟ ನಿರುದ್ಯೋಗಿಗಳಿಗೆ ಯಾವ ಕಾರಣಕ್ಕಾಗಿ ಉದ್ಯೋಗ ಸೌಲಭ್ಯ ಕಲ್ಪಿಸಿಕೊಟ್ಟಿರುವುದಿಲ್ಲ ಮತ್ತು ಇವರುಗಳಿಗೆ ಯಾವಾಗ ಉದ್ಯೋಗ ಸೌಲಭ್ಯವನ್ನು ಕಲ್ಪಿಸಿಕೊಡಲಾಗುವುದು (ವಿವರ ಒದಗಿಸುವುದು)	ಸಾರ್ವಜನಿಕ ವಲಯದಲ್ಲಿನ ಖಾಲಿ ಹುದ್ದೆಗಳ ಭರ್ತಿ ಮತ್ತು ಖಾಸಗಿ ವಲಯದಲ್ಲಿ ಹೆಚ್ಚು ಸೃಜನೆಯಾಗುತ್ತಿರುವ ಹುದ್ದೆಗಳನ್ನು ಪಡೆಯಲು ಅಗತ್ಯ ಕೌಶಲ್ಯ ತರಬೇತಿ ಮೂಲಕ ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗ ಕಲ್ಪಿಸುವುದರ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತಿದೆ.

ಸಂಖ್ಯೆ: ಕೌಉಜೀಇ 11 ಕೈತಪ್ರ 2019

(ಪಿ.ಟಿ.ಪರಮೇಶ್ವರ ನಾಯ್ಕ್)
ಮುಜರಾಯಿ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ
ಮತ್ತು ಜೀವನೋಪಾಯ ಸಚಿವರು